ಕರ್ನಾಟಕ ಸರ್ಕಾರ
ನಿರ್ದೇಶಕರಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು
E-mail:commissioner.pue@gmail.com. * Ph. No.23361857, 23361858* Fax-23361852

ಸಂಖ್ಯೆ: ಪಪೂಶಿ/ಶೈಶಾ-04/ಪ.ಗ್ರ/2017-2018 ದಿನಾಂಕ:22-01-2018

# ಸುತ್ತೋಲೆ

ವಿಷಯ:- ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಬುಕ್ ಬ್ಯಾಂಕ್ ಸ್ಥಾಪಿಸಿ ಅವುಗಳಿಗೆ ಬಾಷೆ ಹಾಗೂ ಕಲಾ ವಿಷಯಗಳ ಪಠ್ಯ ಪುಸ್ತಕಗಳನ್ನು ಪುಸ್ತಕ ನಿಧಿ (ಬುಕ್ ಬ್ಯಾಂಕ್) ಯೋಜನೆಯಡಿ ಖರೀದಿಸಿ ವಿತರಿಸುವ ಬಗ್ಗೆ

ಉಲ್ಲೇಖ- ಸರ್ಕಾರಿ ಆದೇಶ ಸಂಖ್ಯೆ :ಇಡಿ/18ಯೋಸಾಕ-2018 ದಿನಾಂಕ 16/01/2018

------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರಿ ಆದೇಶದನ್ವಯ ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಭಾಷೆ ಮತ್ತು ಕಲಾ ವಿಭಾಗಗಳಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಹಾಗೂ ದ್ವಿತೀಯ ಪಿಯುಸಿಯಲ್ಲಿ ಅಧ್ಯಯನ ಮಾಡುತ್ತಿರುವ ಪರಿಶಿಷ್ಟ ಜಾತಿ/ಪಂಗಡಗಳ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಪುಸ್ತಕಗಳನ್ನು ಪುಸ್ತಕ ನಿಧಿ ಯೋಜನೆಯಡಿ (Book Bank) ಖರೀದಿಸಿ ವಿತರಿಸಲು ಸಂಬಂಧಪಟ್ಟ ಪ್ರಾಂಶುಪಾಲರುಗಳಿಗೆ ಹಣ ಬಿಡುಗಡೆ ಮಾಡಲಾಗಿದೆ.

**ಭಾಷೆ:-** ಕನ್ನಡ, ಇಂಗ್ಲೀಷ್

**ಕಲಾ ವಿಭಾಗ:-** ರಾಜ್ಯಶಾಸ್ತ್ರ, ಸಮಾಜಶಾಸ್ತ್ರ, ಇತಿಹಾಸ

ಸದರಿ ಪಠ್ಯಪುಸ್ತಕಗಳನ್ನು ಖರೀದಿಸಲು ಕೆಟಿಪಿಪಿ ನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸುವುದು. ಜಿಲ್ಲಾ ಉಪ ನಿರ್ದೇಶಕರ ನೇತೃತ್ವದಲ್ಲಿ, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಹಿರಿಯ ಪ್ರಾಂಶುಪಾಲರನ್ನೊಳಗೊಂಡಂತೆ, ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು ಹಾಗೂ ಜಿಲ್ಲಾ ಬುಡಕಟ್ಟು ಅಧಿಕಾರಿಗಳ 'ಪುಸ್ತಕ ಖರೀದಿ ಸಮಿತಿ'ಯನ್ನು ರಚಿಸಿ ನಿಯಮಾನುಸಾರ ಖರೀದಿ ಪ್ರಕ್ರಿಯೆಯನ್ನು ನಡೆಸಲು ಕ್ರಮವಹಿಸುವುದು.

- ಜಿಲ್ಲಾ ಉಪ ನಿರ್ದೇಶಕರು ಹಣ ಬಿಡುಗಡೆಯಾಗಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳ ಸಭೆಯನ್ನು ಕರೆದು 'ಪುಸ್ತಕ ಖರೀದಿ ಸಮಿತಿ'ಯಲ್ಲಿ ತೆಗೆದುಕೊಂಡ ನಿರ್ಣಯಗಳ ಬಗ್ಗೆ ಸೂಕ್ತ ನಿರ್ದೇಶನ ನೀಡುವುದು.
- **ಪುಸ್ತಕ ಖರೀದಿ ಪ್ರಕ್ರಿಯೆಯನ್ನು ದಿನಾಂಕ 20/02/2018 ರೊಳಗೆ ಪೂರೈಸಿ ಬಳಿಕ ಪ್ರಮಾಣ ಪತ್ರವನ್ನು ದಿನಾಂಕ: 28.02.2018 ರೊಳಗಾಗಿ ಜಂಟಿ ನಿರ್ದೇಶಕರು(ಶೈಕ್ಷಣಿಕ), ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ 18 ನೇ ಕ್ರಾಸ್, ಬೆಂಗಳೂರು. ಇವರಿಗೆ ಕಡ್ಡಾಯವಾಗಿ ಸಲ್ಲಿಸುವುದು.**

- ಖರೀದಿಸಿರುವ ಪಠ್ಯಪುಸ್ತಕಗಳನ್ನು ಪುಸ್ತಕ ನಿಧಿ (Book Bank) ರಿಜಿಸ್ಟರ್‌ನಲ್ಲಿ ತಪ್ಪದೆ ನಮೂದಿಸುವುದು.
- ಪಠ್ಯಪುಸ್ತಕಗಳ ಮೇಲೆ ಕಾಲೇಜಿನ ಮೊಹರನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಪರಿಶಿಷ್ಟ ಜಾತಿ/ಪಂಗಡ ವಿದ್ಯಾರ್ಥಿಗಳ ಪುಸ್ತಕ ನಿಧಿ ಯೋಜನೆ ಎಂದು ಮೊಹರನ್ನು ನಮೂದಿಸುವುದು.
- ಪರಿಶಿಷ್ಟ ಜಾತಿ/ಪಂಗಡ ವಿದ್ಯಾರ್ಥಿಗಳಿಗೆ ವರ್ಷದ ಕೊನೆಗೆ ಪಠ್ಯಪುಸ್ತಕಗಳನ್ನು ಸುರಕ್ಷಿತವಾಗಿ ಹಿಂತಿರುಗಿಸುವ ಷರತ್ತಿನ ಮೇರೆಗೆ ವಿತರಿಸುವುದು. ಹಿಂಪಡೆದ ಪುಸ್ತಕಗಳನ್ನು ನಂತರದ ಶೈಕ್ಷಣಿಕ ವರ್ಷದಲ್ಲಿ ಮತ್ತೊಮ್ಮೆ ಅತಿಹೆಚ್ಚು ಅಂಕಪಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನೀಡುವುದು. ಈ ರೀತಿ ಒಂದು ಬಾರಿ ಖರೀದಿಸಿದ ಪಠ್ಯಪುಸ್ತಕಗಳನ್ನು 3 ಶೈಕ್ಷಣಿಕ -ಸಾಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಉಪಯೋಗಿಸಿಕೊಳ್ಳುವುದು.
- ವಿತರಿಸುವ ಪಠ್ಯಪುಸ್ತಕಗಳಿಗಿಂತ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿರುವ ಸಂದರ್ಭಗಳಲ್ಲಿ ಹಿಂದಿನ ವರ್ಷದಲ್ಲಿ (ಎಸ್.ಎಸ್.ಎಲ್.ಸಿ ಅಥವಾ ಪ್ರಥಮ ಪಿಯುಸಿ) ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪುಸ್ತಕಗಳನ್ನು ವಿತರಿಸುವುದು.
- ವಿದ್ಯಾರ್ಥಿಗಳಿಗೆ ವಿತರಿಸುವ ಪುಸ್ತಕಗಳ ವಿವರಗಳನ್ನು 2016–2017 ಸಾಲಿನಂತೆ ಇಲಾಖಾ ವೆಬ್‌ಸೈಟ್ PUC online portal ನಲ್ಲಿ ನಮೂದಿಸುವುದು ಕಡ್ಡಾಯವಾಗಿರುತ್ತದೆ.
- ಪ್ರಾಂಶುಪಾಲರುಗಳಿಗೆ ಬಿಡುಗಡೆಯಾದ ಅನುದಾನವು ಸರ್ಕಾರದ ಮಹತ್ವಾಕಾಂಕ್ಷಿ ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಾಗಿದ್ದು ಯಾವುದೇ ಲೋಪವಾದಲ್ಲಿ ಸಂಬಂಧಿಸಿದ ಪ್ರಾಂಶುಪಾಲರನ್ನು ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

24/1/18

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:-

1. ಎಲ್ಲಾ ಜಿಲ್ಲಾ ಉಪನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ ರವರಿಗೆ ಮುಂದಿನ ಕ್ರಮಕ್ಕಾಗಿ
2. ನಿರ್ದೇಶಕರ ಆಪ್ತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ
3. ಲೆಕ್ಕ ಪತ್ರಾಧಿಕಾರಿಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ
4. ಇ-ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
5. ಕಛೇರಿ ಪ್ರತಿ.